ಕರ್ನಾಟಕ ಸರ್ಕಾರ

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,

ಆಯುಕ್ತರ ಕಛೇರಿ, ನಂ.16-ಡಿ, 3ನೇ ಮಹಡಿ, ಡಿ.ದೇವರಾಜ ಅರಸು ಭವನ, ಮಿಲ್ಲರ್ಸ್ ಟ್ಯಾಂಕ್ ಬೆಡ್ ಏರಿಯಾ, ವಸಂತ ನಗರ, ಬೆಂಗಳೂರು-560 052,

**No:** ಹಿಂವಕಇ/ತರಬೇತಿ-2/ಪಿಹೆಚ್.ಡಿ/ ಸಿಆರ್-4/2018-19 ದಿನಾಂಕ: 19/11/18

**ಪೂರ್ಣಾವಧಿ ಪಿಎಚ್.ಡಿ ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಂದ ವ್ಯಾಸಂಗ ವೇತನ/ಫೆಲೋಶಿಪ್ ಮಂಜೂರಾತಿಗಾಗಿ ಅರ್ಜಿ ಆಹ್ವಾನ**

2018-19ನೇ ಸಾಲಿನಲ್ಲಿ ಪೂರ್ಣಾವಧಿ ಪಿಎಚ್.ಡಿ ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ ಪ್ರವರ್ಗ-I, II(ಎ), III(ಎ), III(ಬಿ) ಹಾಗೂ Other OBC ಗಳಿಗೆ ಸೇರಿದ ಅರ್ಹ ವಿದ್ಯಾರ್ಥಿಗಳಿಗೆ ಮಾಸಿಕ ರೂ.10,000/- ದಂತೆ ವ್ಯಾಸಂಗ ವೇತನ/ಫೆಲೋಶಿಪ್ ಮಂಜೂರು ಮಾಡಲು ಅರ್ಜಿ ಆಹ್ವಾನಿಸಲಾಗಿದೆ. ಇಲಾಖೆಯಿಂದ ಈ ಹಿಂದೆ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್ ಗೆ ಆಯ್ಕೆಯಾಗಿದ್ದು, ಪ್ರಸ್ತುತ ಸಾಲಿನಲ್ಲಿ ಮುಂದುವರಿಯುತ್ತಿರುವ ಅರ್ಹ ನವೀಕರಣ ಹಾಗೂ 2018-19ನೇ ಸಾಲಿನಲ್ಲಿ ಪ್ರಥಮ ವರ್ಷದಲ್ಲಿ ಅಭ್ಯಾಸಿಸುತ್ತಿರುವ ಹೊಸ ವಿದ್ಯಾರ್ಥಿಗಳು online ಮೂಲಕ ಅರ್ಜಿ ಸಲ್ಲಿಸಬಹುದು.

ಅರ್ಹತೆ ಮತ್ತು ಸೂಚನೆಗಳು:

**ಅ)** ವಿದ್ಯಾರ್ಥಿಯು ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು.

**ಆ)** ಹಿಂದುಳಿದ ವರ್ಗಗಳ ಪ್ರವರ್ಗ-I, II(ಎ), III(ಎ), III(ಬಿ) ಅಥವಾ Other OBC ಗೆ ಸೇರಿರಬೇಕು.

**ಇ)** ವಿದ್ಯಾರ್ಥಿ ಮತ್ತು ಕುಟುಂಬದ ಒಟ್ಟು ವಾರ್ಷಿಕ ಆದಾಯ ಮಿತಿ –

- ವ್ಯಾಸಂಗ ವೇತನ/ಫೆಲೋಶಿಪ್ ಗೆ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳಿಗೆ ನಿಗದಿ ಪಡಿಸಿರುವ ವಾರ್ಷಿಕ ಆದಾಯ ಮಿತಿ:-

| ಕ್ರ.ಸಂ | ಪ್ರವರ್ಗ | ಆದಾಯ ಮಿತಿ (ರೂ.ಗಳಲ್ಲಿ) |
|---|---|---|
| **1** | I | **4.50 ಲಕ್ಷ** |
| **2** | II(ಎ), III(ಎ), III(ಬಿ) ಹಾಗೂ Other OBC | **3.50 ಲಕ್ಷ** |

**ಈ)** ಸ್ನಾತಕೋತ್ತರ ಪದವಿಯಲ್ಲಿ ಕನಿಷ್ಠ ಶೇ.55 ಅಂಕಗಳನ್ನು ಪಡೆದಿರಬೇಕು.

**ಉ)** ವಿಶ್ವವಿದ್ಯಾಲಯ/ಅಧಿಕೃತ ಸಂಸ್ಥೆಗಳಲ್ಲಿನ ಸಂಶೋಧನಾ ಮಾರ್ಗದರ್ಶಕರಡಿಯಲ್ಲಿ ಪಿಎಚ್.ಡಿ ಅಧ್ಯಯನಕ್ಕಾಗಿ ನೋಂದಣಿ ಮಾಡಿಕೊಂಡಿರಬೇಕು.

**ಊ)** On-line ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 30/11/18, ಸಂಜೆ ೫.೦೦ ಗಂಟೆ ಆಗಿರುತ್ತದೆ.

**ಋ)** ಹೆಚ್ಚಿನ ವಿವರಗಳಿಗಾಗಿ ಇಲಾಖಾ ವೆಬ್ ಸೈಟ್ **www.backwardclasses.kar.nic.in** ಅನ್ನು ನೋಡಬಹುದು. ಸಹಾಯವಾಣಿ ಸಂಖ್ಯೆ: **8050770004**

ಆಯುಕ್ತರು,

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,

ಬೆಂಗಳೂರು.